ಅ) ಬಂದಿದೆ.

ಸುತ್ತೋಲೆ ಸಂಖ್ಯೆ: ಆಯವ್ಯಯ, 3: ವೇತನ: ಪಾವತಿ:2, 2011–12, ದಿನಾಂಕ 24.05.2011.

ಆ) ವೇತನ ಪಾವತಿಯು ವಿಳಂಬವಾಗುತ್ತಿರುವ ಬಗ್ಗೆ ಯಾವುದೇ ದೂರು ಬಂದಿರುವುದಿಲ್ಲ.

ಇ) ಬಂದಿದೆ.

ವೈದ್ಯಕೀಯ ವೆಚ್ಚ ಮರುಪಾವತಿಗೆ ರೂ. 2105.00 ಲಕ್ಷಗಳು.
ಪ್ರವಾಸ ಭತ್ಯೆ ಪಾವತಿಗಾಗಿ ರೂ. 512.00 ಲಕ್ಷಗಳು

ಈ) ಅನುದಾನ ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚನೆ ನಡೆಸಿದ್ದು ಅಗತ್ಯ ಅನುದಾನವನ್ನು ಶೀಘ್ರವಾಗಿ ಬಿಡುಗಡೆ ಮಾಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಉ) ಬಂದಿದೆ.

ಊ) ಅನುದಾನ ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚನೆ ನಡೆಸಿದ್ದು ಅಗತ್ಯ ಅನುದಾನವನ್ನು ಶೀಘ್ರವಾಗಿ ಬಿಡುಗಡೆ ಮಾಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಗ್ರಾಮೀಣ ಸಂಪರ್ಕ ರಸ್ತೆ ಅಭಿವೃದ್ಧಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 133 (132)
ಸದಸ್ಯರ ಹೆಸರು : ಶೀ ಸಿ.ಬಿ.ಸುರೇಶ್ ಬಾಬು (ಚಿಕ್ಕನಾಯಕನಹಳ್ಳಿ)
ಉತ್ತರಿಸುವ ಸಚಿವರು : ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಪ್ರಶ್ನೆಗಳು:

ಅ) ತುಮಕೂರು ಜಿಲ್ಲೆ ಚಿಕ್ಕನಾಕನಹಳ್ಳಿ ವಿಧಾನಸಭಾ ಕ್ಷೇತ್ರದ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮೀಣ ಸಂಪರ್ಕ ರಸ್ತೆಗಳು ಅನುದಾನದ ಕೊರತೆಯಿಂದ ದುರಸ್ತಿಯಾಗದಿರುವುದು ಸರ್ಕಾರದ

ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಗ್ರಾಮೀಣ ಸಂಪರ್ಕ ರಸ್ತೆಗಳ ದುರಸ್ತಿಗಾಗಿ ಸರ್ಕಾರ ಯಾವ ಯೋಜನೆಯನ್ನು ರೂಪಿಸಿದೆ? (ಮಾಹಿತಿ ನೀಡುವುದು);

ಇ) ಈ ಸಾಲಿನ ಅನುದಾನದಲ್ಲಿ ಸೂಕ್ತ ಅನುದಾನ ಬಿಡುಗಡೆ ಮಾಡಿ ಗ್ರಾಮೀಣ ಸಂಪರ್ಕ ರಸ್ತೆಗಳನ್ನು ದುರಸ್ತಿ ಮಾಡಲಾಗುವುದೇ?

ಉತ್ತರಗಳು:

ಅ) ಬಂದಿದೆ.

ಆ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿನ ಗ್ರಾಮ ಪಂಚಾಯಿತಿಗಳ ರಸ್ತೆ ಉದ್ದ ಒಟ್ಟು 703.40 ಕಿ.ಮೀ ಇದ್ದು, ಇದರಲ್ಲಿ ಡಾಂಬರು ರಸ್ತೆ, 149.40 ಕಿ.ಮೀ. ಜಲ್ಲಿ ರಸ್ತೆ 20.60 ಕಿ.ಮೀ ಹಾಗೂ ಉಳಿದ 533.40 ಕಿ.ಮೀ. ಮಣ್ಣಿನ ರಸ್ತೆಯಾಗಿರುತ್ತದೆ.

ಪ್ರಸ್ತುತ 2011–12ನೇ ಸಾಲಿನಲ್ಲಿ 13ನೇ ಹಣಕಾಸು ಯೋಜನೆಯಡಿ ರೂ. 52.61 ಲಕ್ಷಗಳಲ್ಲಿ 11.60 ಕಿ.ಮೀ ಡಾಂಬರು ರಸ್ತೆ, 5.00 ರಸ್ತೆ ಕಿ.ಮೀ. ಜಲ್ಲಿ ರಸ್ತೆ ಮತ್ತು 3.90 ಕಿ.ಮೀ. ಗ್ರಾವಲ್ ರಸ್ತೆಗಳ ನಿರ್ವಹಣೆ/ ನವೀಕರಣ ಕೈಗೊಂಡಿದ್ದು, ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.

ಸಿ.ಎಂ.ಜಿ.ಎಸ್.ವೈ.(3054) ಅಡಿ ರೂ. 72.88 ಲಕ್ಷಗಳಲ್ಲಿ 34.30 ಕಿ.ಮೀ ರಸ್ತೆಯನ್ನು ಅಭಿವೃದ್ಧಿಪಡಿಸಲಾಗುತ್ತಿದ್ದು, ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ.

ಇದಲ್ಲದೆ, 2011–12ನೇ ಸಾಲಿನಲ್ಲಿ ಬಿದ್ದ ಭಾರಿ ಮಳೆಯಿಂದ ಹಾನಿಗೊಳಗಾದ ಗ್ರಾಮೀಣ ರಸ್ತೆ, ಚರಂಡಿ ಹಾಗೂ ಸಿ.ಡಿ.ಗಳ ತುರ್ತು ನಿರ್ವಹಣೆ / ದುರಸ್ತಿಗಾಗಿ ರೂ. 13.04 ಲಕ್ಷಗಳ ಅನುದಾನ ಹಂಚಿಕೆಯಾಗಿದ್ದು, ಕ್ರಿಯಾ ಯೋಜನೆಯಂತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುವುದು.

ಇ) ಪ್ರಸ್ತುತ ಸಿ.ಎಂ.ಜಿ.ಎಸ್.ವೈ ಅಡಿ ರೂ. 53.78 ಲಕ್ಷ

ಬಿಡುಗಡೆಯಾಗಿದ್ದು, ಅನುಮೋದಿತ ಕ್ರಿಯಾ ಯೋಜನೆಯಂತೆ ರಸ್ತೆ ದುರಸ್ತಿ / ನಿರ್ವಹಣೆ ಕಾಮಗಾರಿಗಳನ್ನು ಕೈಗೊಂಡು ಮಾರ್ಚ್–2012 ಅಂತ್ಯದೊಳಗೆ ಜಿಲ್ಲಾ ಪಂಚಾಯತ್ ವತಿಯಿಂದ ಪೂರ್ಣಗೊಳಿಸಲಾಗುವುದು.

ಸರ್ಕಾರಿ ಡಿಪ್ಲೊಮೊ ಮತ್ತು ಇಂಜಿನಿಯರಿಂಗ್ ಕಾಲೇಜುಗಳ ಮಂಜೂರಾತಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 132 (131)

ಸದಸ್ಯರ ಹೆಸರು : ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಕನಹಳ್ಳಿ)

ಉತ್ತರಿಸುವ ಸಚಿವರು : ಡಾ. ವಿ.ಎಸ್.ಆಚಾರ್ಯ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಪ್ರಶ್ನೆಗಳು:

ಅ) ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲ್ಲೂಕು ಕೇಂದ್ರವು ಡಾ.ನಂಜುಂಡಪ್ಪ ವರದಿಯನ್ವಯ ಅತಿ ಹಿಂದುಳಿದ ತಾಲ್ಲೂಕು ಕೇಂದ್ರವಾಗಿದ್ದು, ಇಲ್ಲಿ ಸರ್ಕಾರಿ ಡಿಪ್ಲೊಮೊ ಮತ್ತು ಇಂಜಿನಿಯರಿಂಗ್ ಕಾಲೇಜಿನ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಈ ಸಾಲಿನಲ್ಲಿ ಹೊಸ ಸರ್ಕಾರಿ ಡಿಪ್ಲೊಮೊ ಮತ್ತು ಇಂಜಿನಿಯರಿಂಗ್ ಕಾಲೇಜು ಮಂಜೂರು ಮಾಡಲು ಸರ್ಕಾರ ಅಗತ್ಯ ಕ್ರಮ ತೆಗೆದುಕೊಳ್ಳಲಾಗುವುದೇ?

ಇ) ಸದರಿ ಡಿಪ್ಲೊಮೊ ಮತ್ತು ಇಂಜಿನಿಯರಿಂಗ್ ಕಾಲೇಜುಗಳನ್ನು ನಿರ್ಮಿಸಲು ಕಟ್ಟಡಕ್ಕೆ ಸ್ಥಳ ಗುರುತಿಸಿ, ಭೂಸ್ವಾಧೀನಪಡಿಸಿಕೊಳ್ಳಲಾಗಿದೆಯೇ?

ಈ) ಹಾಗಿದ್ದಲ್ಲಿ, ನಗರದ ಯಾವ ಭಾಗದಲ್ಲಿ ಸ್ಥಳ ಗುರುತಿಸಿ ಭೂಸ್ವಾಧೀನಪಡಿಸಿಕೊಳ್ಳಲಾಗಿದೆ?

ಉತ್ತರಗಳು: